**ಕರ್ನಾಟಕ ವಿಧಾನ ಪರಿಷತ್ತು**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 952(1063)**
**ಸದಸ್ಯರ ಹೆಸರು : ಶ್ರೀ ಡಾ. ಡಿ ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)**
**ದಿನಾಂಕ : 25.08.2026**
**ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರದಲ್ಲಿ ಹಲವಡೆ ದುರಸ್ತಿಯಲ್ಲಿರುವ ಸರ್ಕಾರಿ ಕಟ್ಟಡಗಳಾದ ಕಿವುಡು ಮತ್ತು ಮೂಗರ ಶಾಲೆ ಶತಮಾನೋತ್ಸವ ಭವನ (100 ವರ್ಷಗಳ ಹಳೆಯ ಶಾಲೆ) ಪೌರಕಾರ್ಮಿಕರ ವಿಶ್ರಾಂತಿ ಗೃಹ ಶಿಥಿಲವಾದ ಉಗ್ರಾಣಗಳನ್ನು ಸುಸ್ಥಿತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಮೈಸೂರು ನಗರದ ವ್ಯಾಪ್ತಿಯಲ್ಲಿರುವ ಸರ್ಕಾರಿ ಸಂಸ್ಥೆಯಾದ ಕಿವುಡ ಮತ್ತು ಮೂಗರ ಶಾಲೆಯ ಹಳೆಯ ಶತಮಾನೋತ್ಸವ ಭವನಕ್ಕೆ ಯಾವುದೇ ದುರಸ್ಥಿ ಕಾಮಗಾರಿಗಳನ್ನು ಮಹಾನಗರ ಪಾಲಿಕೆಯ ವತಿಯಿಂದ ಕೈಗೊಂಡಿರುವುದಿಲ್ಲ. ಶಾಲೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅತ್ಯವಶ್ಯವಾಗಿರುವ ಕಾಮಗಾರಿಗಳನ್ನು ಅಂಗವಿಕಲರ ಅನುದಾನವಾದ ಶೇ.5ರಲ್ಲಿ ಕೈಗೊಳ್ಳಲಾಗಿರುತ್ತದೆ.<br>ಪೌರ ಕಾರ್ಮಿಕರ ವಿಶ್ರಾಂತಿ ಕೊಠಡಿಗಳಿಗೆ ಸಂಬಂಧಿಸಿದಂತೆ ಪಾಲಿಕೆಯ ವ್ಯಾಪ್ತಿಯಲ್ಲಿರುವ ಹಳೆಯ ಮತ್ತು ಶಿಥಿಲಗೊಂಡಿರುವ ವಿಶ್ರಾಂತಿ ಕೊಠಡಿಗಳ ದುರಸ್ಥಿಗೆ ಹಾಗೂ ಅವಶ್ಯವಿರುವ ನೂತನ ಪೌರ ಕಾರ್ಮಿಕರ ಕೊಠಡಿಗಳನ್ನು ನಿರ್ಮಿಸಲು ಶೇ24.10ರಲ್ಲಿ ಪೌರಕಾರ್ಮಿಕರಿಗೆ ಮೀಸಲಿರಿಸಿರುವ ಅನುದಾನದಲ್ಲಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿದ್ದು, ಮಹಾನಗರ ಪಾಲಿಕೆಯ ಹಂತದಲ್ಲಿಯೇ ಅನುಮೋದನೆಗೊಂಡ ನಂತರ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು. |
| ಆ) | ಮೈಸೂರು ನಗರದ ಬಂಬೂ ಬಜಾರ್ ಸಿಗ್ನಲ್ ಹತ್ತಿರ ಸರ್ಕಾರಿ ಉಗ್ರಾಣಗಳು ಶಿಥಿಲಾವಸ್ಥೆಯಲ್ಲಿದ್ದು, ಉಗ್ರಾಣದ ಮೇಲೆ ಗಿಡ ಗಂಟೆಗಳು ಬೆಳೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? | 2025-26ನೇ ಸಾಲಿನ ಆಯವ್ಯಯದ ಭಾಷಣ ಕಂಡಿಕೆ (85) ರಲ್ಲಿ ಕರ್ನಾಟಕ ರಾಜ್ಯ ಉಗ್ರಾಣ ನಿಗಮವನ್ನು ಆರ್ಥಿಕವಾಗಿ ಸದೃಢಗೊಳಿಸುವ ನಿಟ್ಟಿನಲಿ ನಿಗಮದ ಅನುಪಯುಕ್ತ ಆಸ್ತಿಗಳನ್ನು ನಗದೀಕರಣಗೊಳಿಸಲು ಉದ್ದೇಶಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಮೈಸೂರು (ಬಂಬೂ ಬಜಾರ್) ಮತ್ತು ಹುಬ್ಬಳ್ಳಿ (ಕಾಟನ್ ಮಾರ್ಕೆಟ್) ಕೇಂದ್ರಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಯೋಜನೆಯನ್ನು ಘೋಷಿಸಲಾಗಿದೆ. ಅದರಂತೆ ಮೈಸೂರು ನಗರದ ಬಂಬೂ ಬಜಾರ್ ಸಿಗ್ನಲ್ ಹತ್ತಿರ ಶಿಥಿಲಾವಸ್ಥೆಯಲ್ಲಿರುವ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಉಗ್ರಾಣಗಳನ್ನು ನೆಲಸಮಗೊಳಿಸಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡಲು ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ವತಿಯಿಂದ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ನಅಇ 159 ಎಸಿಎಂ 2026 (ಇ)**

**(ಡಾ. ಯತೀಂದ್ರ ಸಿದ್ದರಾಮಯ್ಯ)**
**ನಗರಾಭಿವೃದ್ಧಿ ಸಚಿವರು**